ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಜುಲೈ 28 , 2014

**ಪತ್ರಿಕಾ ಪ್ರಕಟಣೆ**

## ಅರ್ಕಾವತಿ ಬಡಾವಣೆ ಭೂ ಅಕ್ರಮಗಳ ಕುರಿತು
## ರಾಜ್ಯ ಉಚ್ಚ ನ್ಯಾಯಾಲಯದ ನಿವೃತ್ತ ನಾಯಾಧೀಶರಿಂದ ತನಿಖೆ : ಸಿದ್ದರಾಮಯ್ಯ

**ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ) :**

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅರ್ಕಾವತಿ ಬಡಾವಣೆಯಲ್ಲಿ ನಡೆದಿದೆ ಎನ್ನಲಾದ ಭೂ ಅಕ್ರಮಗಳ ಕುರಿತು ನಿರ್ಮಿಸಲು ರಾಜ್ಯ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರಿಂದ ತನಿಖೆ ನಡೆಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಪ್ರಕಟಿಸಿದರು.

ಕಳೆದ ಮೂರು ದಿನಗಳಿಂದ ಸದನದಲ್ಲಿ ಈ ವಿಷಯ ಕುರಿತು ಭಾರತೀಯ ಜನತಾ ಪಕ್ಷವು ಮಾಡುತ್ತಿರುವ ಆರೋಪಗಳು ಸತ್ಯಕ್ಕೆ ದೂರವಾದುದು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಯಾವುದೇ ಡಿನೋಟಿಫಿಕೇಷನ್ ಮಾಡಿಲ್ಲ. ಜಗದೀಶ್ ಶೆಟ್ಟರ್ ನೇತೃತ್ವದ ಸರ್ಕಾರದ ಅವಧಿಯಲ್ಲಿಯೇ ಎಲ್ಲಾ ತೀರ್ಮಾನಗಳೂ ಆಗಿದ್ದವು. ರಾಜ್ಯದ ಆರು ಕೋಟಿ ಜನರಿಗೆ ಸತ್ಯಾಸತ್ಯತೆಯನ್ನು ಬಹಿರಂಗಪಡಿಸಲು ಪ್ರಕರಣ ಕುರಿತು ರಾಜ್ಯ ಸರ್ಕಾರ ನ್ಯಾಯಾಂಗ ತನಿಖೆಗೆ ನಿರ್ಧರಿಸಿದೆ ಎಂದು ರಾಜ್ಯ ವಿಧಾನಸಭಾ ಮೊಗಸಾಲೆಯಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಇಲ್ಲಿ ಇಂದು ವಿವರಿಸಿದರು.

ಅರ್ಕಾವತಿ ಬಡಾವಣೆ ಭೂ ಸ್ವಾಧೀನದ ಪ್ರಾಥಮಿಕ ಅಧಿಸೂಚನೆಯಿಂದ ಅಂತಿಮ ಅಧಿಸೂಚನೆಯವರೆಗೆ ಎಲ್ಲಾ ಪ್ರಸ್ತಾವನೆಗಳನ್ನೂ ನ್ಯಾಯಾಂಗ ತನಿಖೆಗೆ ಪರಾಮರ್ಶಿಸಲು ಸರ್ಕಾರ ಸೂಚಿಸಲಿದೆ. ಪ್ರಕರಣದ ತನಿಖೆಗೆ ನ್ಯಾಯಾಧೀಶರೋರ್ವರನ್ನು ನೇಮಕ ಮಾಡುವಂತೆ ಹಾಗೂ ಕಾಲಮಿತಿ ನಿಗದಿಪಡಿಸುವಂತೆ ರಾಜ್ಯ ಸರ್ಕಾರ ರಾಜ್ಯ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯವರಿಗೆ ಶೀಘ್ರದಲ್ಲಿಯೇ ಮನವಿ ಮಾಡಲಿದೆ.

ಬಡಾವಣೆ ನಿರ್ಮಾಣದ ಭೂಸ್ವಾಧೀನದಲ್ಲಿ ನಡೆದಿದೆ ಎನ್ನಲಾದ ಅಕ್ರಮ ಕುರಿತಂತೆ ನ್ಯಾಯಾಂಗ ತನಿಖೆ ಸಿ ಐ ಡಿ ಅಥವಾ ಸದನ ಸಮಿತಿ ರಚನೆಗೂ ರಾಜ್ಯ ಸರ್ಕಾರ ಮುಂದಾಗಿತ್ತು. ಪ್ರತಿಪಕ್ಷವಾದ ಭಾರತೀಯ ಜನತಾ ಪಕ್ಷವು ಈ ಪ್ರಕರಣವನ್ನು ಮುಚ್ಚಿ ಹಾಕಲು ಸಿ ಬಿ ಐ ಗೆ ಒಪ್ಪಿಸಬೇಕೆಂದು ರಾಜಕೀಯ ಮಾಡುತ್ತಿದೆ. ಅವರಿಗೆ ನೈಜ ವಿಷಯ ಏನೆಂಬುದು ಬಹಿರಂಗವಾಗುವುದು ಬೇಕಿಲ್ಲ. ಪ್ರಕರಣವನ್ನು ರಾಜಕೀಕರಣಗೊಳಿಸುವುದೇ ಅವರ ಮುಖ್ಯ ಉದ್ದೇಶವಾಗಿದೆ ಎಂದು ತರಾಟೆಗೆ ತೆಗೆದು ಕೊಂಡರು.

ಜಗದೀಶ್ ಶೆಟ್ಟರ್ ಅವರ ಸರ್ಕಾರದ ಅವಧಿಯಲ್ಲಿ 2013 ಫೆಬ್ರವರಿ 12 ರಂದು ಒಂದೇ ದಿನ ಎರಡು ಅಧಿಸೂಚನೆಗಳನ್ನು ಹೊರಡಿಸಿ, ಮೊದಲ ಅಧಿಸೂಚನೆಯಲ್ಲಿ 422.25 ಎಕರೆ ಮತ್ತು ಅದೇ ದಿನ ಹೊರಡಿಸಿದ ಮತ್ತೊಂದು ಅಧಿಸೂಚನೆಯಲ್ಲಿ 119.09 ಎಕರೆ ಭೂಮಿ ಒಳಗೊಂಡಂತೆ 541.34 ಎಕರೆ ಜಮೀನನ್ನು ಡಿನೋಟಿಫೈ ಮಾಡಲಾಗಿದೆ. ಅಲ್ಲದೆ, 2013 ರ ರಾಜ್ಯ ವಿಧಾನ ಸಭೆಯ ಚುನಾವಣೆಗೆ ಅನುಕೂಲ ಕಲ್ಪಿಸಲು ಈ ಭೂಮಿಯನ್ನು ಪರಭಾರೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಗಂಭೀರ ಆರೋಪ ಮಾಡಿದರು.

**********

ಡಿ ಪಿ ಎಂ